ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

(28)

ಇಲಾಖೆ / ವಿಷಯ : DEPARTMENT / SUBJECT: ______

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE : 23/12/20

# ನಿಂಬಾಳ್ಕರ್ ವಿರುದ್ಧ ಬಲವಂತದ ಕ್ರಮ ಕೈಗೊಳ್ಳದಂತೆ ಸೂಚನೆ

**ವಿಕ ಸುದ್ದಿಲೋಕ** ಬೆಂಗಳೂರು

ಐಎಂಎ ಬಹುಕೋಟಿ ವಂಚನೆ ಹಗರಣದಲ್ಲಿ ಐಪಿಎಸ್ ಅಧಿಕಾರಿ ಹೇಮಂತ್ ನಿಂಬಾಳ್ಕರ್ ವಿರುದ್ಧ ಯಾವುದೇ ಬಲವಂತದ ಕ್ರಮ ಕೈಗೊಳ್ಳದಂತೆ ಹೈಕೋರ್ಟ್ ಮಂಗಳವಾರ ಸಿಬಿಐಗೆ ಸೂಚನೆ ನೀಡಿದೆ.

**ಐಎಂಎ ಬಹುಕೋಟಿ ವಂಚನೆ ಪ್ರಕರಣ**



ಪ್ರಕರಣ ಸಂಬಂಧ ತಮ್ಮ ವಿರುದ್ಧ ಸಿಬಿಐ ದಾಖಲಿಸಿರುವ ಎಫ್ಐಆರ್ ರದ್ದು ಕೋರಿ ಹೇಮಂತ್ ನಿಂಬಾಳ್ಕರ್ ಸಲ್ಲಿಸಿರುವ ಅರ್ಜಿ, ನ್ಯಾ. ಜಾನ್ ಮೈಕೆಲ್ ಕುನ್ಹಾ ಅವರಿದ್ದ ಏಕ ಸದಸ್ಯ ಪೀಠದ ಮುಂದೆ ವಿಚಾರಣೆಗೆ ಬಂದಿತ್ತು.

ಅರ್ಜಿದಾರರ ಪರ ವಕೀಲರ ವಾದ ಆಲಿಸಿದ ನ್ಯಾಯಪೀಠ, ನಿಂಬಾಳ್ಕರ್ ವಿರುದ್ಧ ತನಿಖೆಗೆ ತಡೆಯಾಜ್ಞೆ ನೀಡಲು ಮುಂದಾಯಿತು. ಅದಕ್ಕೆ ಆಕ್ಷೇಪಿಸಿದ ಸಿಬಿಐ ಪರ ವಕೀಲ ಪಿ.ಪ್ರಸನ್ನಕುಮಾರ್, ಐಎಂಎ ವಂಚನೆ ಪ್ರಕರಣವನ್ನು ಮುಖ್ಯ ನ್ಯಾಯಮೂರ್ತಿಗಳ ನೇತೃತ್ವದ ವಿಭಾಗೀಯಪೀಠ ಮೇಲ್ವಿಚಾರಣೆ ನಡೆಸುತ್ತಿದೆ. ಅರ್ಜಿದಾರರ ವಿರುದ್ಧದ ಆರೋಪಗಳಿಗೆ ತಡೆ ನೀಡಿದರೆ ಉದ್ದೇಶಿತ ಸಮಯದಲ್ಲಿ ತನಿಖೆ ಪೂರ್ಣಗೊಳಿಸಲು ಸಾಧ್ಯವಾಗುವುದಿಲ್ಲ ಎಂದರು.

ಒಂದೇ ಪ್ರಕರಣದಲ್ಲಿ ಎರಡು ಪ್ರತ್ಯೇಕ ನ್ಯಾಯಪೀಠಗಳು, ಬೇರೆ ಬೇರೆ ರೀತಿಯ ನಿರ್ದೇಶನ ನೀಡಿದರೆ ತನಿಖೆ ಮುಂದುವರಿಸಲು ತೊಂದರೆಯಾಗಲಿದೆ ಎಂದು ಅವರು ವಿವರಿಸಿದರು. ಹಾಗಾಗಿ ನಿಂಬಾಳ್ಕರ್ ವಿರುದ್ಧದ ತನಿಖೆಗೆ ತಡೆ ನೀಡುವ ನಿರ್ಧಾರದಿಂದ ನ್ಯಾಯಪೀಠ ಹಿಂದೆ ಸರಿಯಿತು.

## 61 ಸಾವಿರಕ್ಕೂ ಹೆಚ್ಚು ಅರ್ಜಿ

ಐಎಂಎ ಹಗರಣದ ಕುರಿತು ಸಲ್ಲಿಕೆಯಾದ ಹಲವು ಪಿಐಎಲ್ ಮುಖ್ಯ ನ್ಯಾಯಮೂರ್ತಿ ಓಕ್ ನೇತೃತ್ವದ ನ್ಯಾಯಪೀಠದ ಮುಂದೆ ಮಂಗಳವಾರ ವಿಚಾರಣೆಗೆ ಬಂದಿದ್ದವು. ಆಗ ಸರಕಾರಿ ವಕೀಲರು, ಸಕ್ಷಮ ಪ್ರಾಧಿಕಾರನ್ನು ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ ಮತ್ತು ಹೂಡಿಕೆ ಹಣ ಹಿಂದಿರುಗಿಸಲು ಈವರೆಗೆ ಒಟ್ಟು 61,710 ಅರ್ಜಿ ಬಂದಿವೆ ಎಂದು ತಿಳಿಸಿದರು.